# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, 3 ನೇ ಅಡ್ಡರಸ್ತೆ, ಬಸವೇಶ್ವರ ನಗರ, ಹಾವೇರಿ ಈ ಸಂಸ್ಥೆಗೆ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

******

ಓದಲಾಗಿದೆ:

ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪತ್ರ ಸಂಖ್ಯೆ:ಪಿಎಂಬಿ/31/2011-12, ದಿನಾಂಕ 12.07.2011.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, 3 ನೇ ಅಡ್ಡರಸ್ತೆ, ಬಸವೇಶ್ವರ ನಗರ, ಹಾವೇರಿ ಈ ಸಂಸ್ಥೆಯು 2011-12 **ನೇ** ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಹಾಗೂ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ ಕೋರ್ಸುಗಳನ್ನು ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅರ್ಜಿಯನ್ನು ಸಲ್ಲಿಸಿದ್ದು, ಪ್ಯಾರಾ ಮೆಡಿಕಲ್ ಬೋರ್ಡ್ ಈ ಸಂಸ್ಥೆಯಲ್ಲಿ ಸದರಿ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ವರದಿ ಸಲ್ಲಿಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತೆಂದು, ಅದರಂತೆ, ತಪಾಸಣಾ ತಂಡವು ಸಂಸ್ಥೆಗೆ ಭೇಟಿ ನೀಡಿ, ಸ್ಥಳ ತಪಾಸಣೆ ನಡೆಸಿ, ಈ ಸಂಸ್ಥೆಯಲ್ಲಿ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಹಾಗೂ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ ಕೋರ್ಸುಗಳನ್ನು ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಶಿಫಾರಸ್ಸು ಮಾಡಿರುತ್ತದೆಂದು ತಿಳಿಸುತ್ತಾ, ಸದರಿ ಸಂಸ್ಥೆಗೆ 2011-12 ನೇ ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಹಾಗೂ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ ಕೋರ್ಸುಗಳನ್ನು ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ. ಮುಂದುವರೆದು, ತಪಾಸಣಾ ತಂಡವು ಸಲ್ಲಿಸಿರುವ ವರದಿಯನ್ನು ಹಾಗೂ ಈ ಬಗ್ಗೆ ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ಜರುಗಿದ ಸಭೆಯ ನಡವಳಿಯ ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, 3 ನೇ ಅಡ್ಡರಸ್ತೆ, ಬಸವೇಶ್ವರ ನಗರ, ಹಾವೇರಿ ಈ ಸಂಸ್ಥೆಗೆ 2011-12 ನೇ ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಹಾಗೂ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ ಕೋರ್ಸುಗಳನ್ನು ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 148 ಎಂಪಿಎಸ್ 2011, ಬೆಂಗಳೂರು, ದಿನಾಂಕ 04-02-2012**

ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್,. 3 ನೇ ಅಡ್ಡರಸ್ತೆ, ಬಸವೇಶ್ವರ ನಗರ, ಹಾವೇರಿ ಈ ಸಂಸ್ಥೆಗೆ 2011-12 ನೇ ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಹಾಗೂ ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ ಕೋರ್ಸುಗಳನ್ನು ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು, ಮಂಜೂರಾತಿ ನೀಡಿ ಆದೇಶಿಸಿದೆ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರ ಮೆಡಿಕಲ್ ಸೈನ್ಸಸ್, ಹಾವೇರಿ ಈ ಸಂಸ್ಥೆಯನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

**ಓದಲಾಗಿದೆ:** ವಿಶೇಷಾಧಿಕಾರಿ, ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ:ಪಿಎಂಬಿ/104/2018-19, ದಿ:12.07.2019 & ಪಿಎಂಬಿ/36/19-20.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ವಿಶೇಷಾಧಿಕಾರಿ, ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ ಇವರು ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರ ಮೆಡಿಕಲ್ ಸೈನ್ಸಸ್, ಹಾವೇರಿ ಈ ಸಂಸ್ಥೆಯನ್ನು 20(ಇಪ್ಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೋಮ ಇನ್ ಆಪ್ಟಾಲ್ಮಿಕ್ ಟೆಕ್ನಾಲಜಿ ಕೋರ್ಸನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡಲು ಲಭ್ಯವಿರುವ ಸುಸಜ್ಜಿತ ಕಟ್ಟಡ, ಗ್ರಂಥಾಲಯ, ವಾಹನ ಸೌಲಭ್ಯ, ಬೋಧನ ಸಿಬ್ಬಂದಿ ಹಾಗೂ ಇನ್ನಿತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಬಗ್ಗೆ ತಪಾಸಣಾ ತಂಡದಿಂದ ತಪಾಸಣಾ ನಡೆಸಿ, ತಪಾಸಣಾ ತಂಡದ ಶಿಫಾರಸ್ಸಿನನ್ವಯ ಮೇಲ್ಕಂಡ ಕೋರ್ಸನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರ ಮೆಡಿಕಲ್ ಸೈನ್ಸಸ್, ಶಾರದ ಮಹೇಶ್ವರ ಪ್ಯಾಲೇಸ್, ದಾನಮ್ಮ ದೇವಸ್ಥಾನದ ರಸ್ತೆ, ಮುನ್ಸಿಪಲ್ ಹೈಸ್ಕೂಲ್ ಎದುರು, ಹಾವೇರಿ-581110 ಈ ಸಂಸ್ಥೆಯನ್ನು 20(ಇಪ್ಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೋಮ ಇನ್ ಆಪ್ಟಾಲ್ಮಿಕ್ ಟೆಕ್ನಾಲಜಿ ಕೋರ್ಸನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಂಇಡಿ 173 ಎಂಪಿಎಸ್ 2019, ಬೆಂಗಳೂರು, ದಿನಾಂಕ: 25.09.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೇಯಸ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರ ಮೆಡಿಕಲ್ ಸೈನ್ಸಸ್, ಶಾರದ ಮಹೇಶ್ವರ ಪ್ಯಾಲೇಸ್, ದಾನಮ್ಮ ದೇವಸ್ಥಾನದ ರಸ್ತೆ, ಮುನ್ಸಿಪಲ್ ಹೈಸ್ಕೂಲ್ ಎದುರು, ಹಾವೇರಿ-581110 ಈ ಸಂಸ್ಥೆಯನ್ನು 20(ಇಪ್ಪತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೋಮ ಇನ್ ಆಪ್ಟಾಲ್ಮಿಕ್ ಟೆಕ್ನಾಲಜಿ ಕೋರ್ಸನ್ನು 2019-20ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಈ ಮುಂದಿನ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತು ಮತ್ತು ನಿಬಂಧನೆಗಳು**

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ಶುಲ್ಕವನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಈ ಸಂಸ್ಥೆಯವರು ಸದರಿ ಕೋರ್ಸುಗಳನ್ನು ಪ್ರಾರಂಭಿಸುವ ಮೊದಲು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ಪ್ಯಾರಾ ಮೆಡಿಕಲ್ ಬೋರ್ಡ್‌ನ ಕ್ಯಾಲೆಂಡರ್ ಆಫ್ ಇವೆಂಟ್ಸ್‌ನ ಪ್ರಕಾರ ಪ್ರವೇಶಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು, ಮೂಲ ಅಂಕಪಟ್ಟಿಗಳನ್ನು ಮತ್ತು ದೃಢೀಕರಣಗಳನ್ನು ಈ ಸಂಸ್ಥೆಯವರು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

BU 25/9/2019

. . . .2